ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/18/2016-17. ದಿನಾಂಕ:01-08-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಎಸ್.ಬಿ.ವೀರಣ್ಣ ತಂದೆ ಸಣ್ಣ ಗಂಗಪ್ಪ<br>2)ಸಣ್ಣ ಗಂಗಪ್ಪ ತಂದೆ ಲೇಟ್ ದೊಡ್ಡಗಂಗಪ್ಪ<br>ಹುಲಿಕೇರಿ ಗ್ರಾಮ ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಹುಲಿಕೇರಿ ಗ್ರಾಮದ ಸನಂ 232/6. ವಿಸ್ತೀರ್ಣ 2-00 ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹುಲಿಕೇರಿ ಗ್ರಾಮದ ಸನಂ 232/6. ವಿಸ್ತೀರ್ಣ 2-00 ಎಕ್ರೆ ಜಮೀನನ್ನು ಸದರಿ ಗ್ರಾಮದ ಎಸ್.ಬಿ.ವೀರಣ್ಣ ತಂದೆ ಸಣ್ಣ ಗಂಗಪ್ಪ ಇವರು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹುಲಿಕೇರಿ ಇವರು ನಮೂನೆ-21 ನೋಟಿಸನ್ನು ದಿನಾಂಕ 30-07-2011. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷದಲ್ಲಿನ ಇನ್ನಿತರೇ ವಾರಸುದಾರರ ಒಪ್ಪಿಗೆ ಪಡೆಯದೇ ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 08/2011-12. ದಿನಾಂಕ 01-09-2011. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 25-07-2016 ರಿಂದ 01-08-2016 ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹುಲಿಕೇರಿ ಗ್ರಾಮದ ಸನಂ 232/6. ವಿಸ್ತೀರ್ಣ 2-00 ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ನನ್ನ ಹಿಸ್ಸಾಕ್ಕೆ ಬಂದಿರುತ್ತದೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಲಭ್ಯವಿರುವ ದಾಖಲೆಗಳ ಪ್ರಕಾರ ಸದರಿ ಜಮೀನನ್ನು ಪಿತ್ರಾರ್ಜಿತ ಆಸ್ತೀಯನ್ನು ಅರ್ಜಿದಾರರೋಬ್ಬರೇ ತಮ್ಮ ಹೆಸರಿಗೆ ಖಾತಾ ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುವ ಕಾರಣ ಅರ್ಜಿದಾರರ ಅರ್ಜಿಯನ್ನು ತಳ್ಳಿಹಾಕಿ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹುಲಿಕೇರಿ ಗ್ರಾಮದ ಸನಂ 232/6. ವಿಸ್ತೀರ್ಣ 2-00 ಎಕ್ರೆ ಜಮೀನನ್ನು ಪಿತ್ರಾರ್ಜಿತ ಆಸ್ತೀಯಾಗಿದ್ದು ಅರ್ಜಿದಾರರೋಬ್ಬರೇ ತಮ್ಮ ಹೆಸರಲ್ಲಿ ಖಾತಾ ವರ್ಗಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುವುದರಿಂದ ಅವರ ಅರ್ಜಿಯನ್ನು ತಳ್ಳಿಹಾಕುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 01-08-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

1/8/16
ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎಸ್.ಬಿ.ವೀರಣ್ಣ ತಂದೆ ಸಣ್ಣ ಗಂಗಪ್ಪ. ಸಣ್ಣ ಗಂಗಪ್ಪ ತಂದೆ ಲೇಟ್ ದೊಡ್ಡ ಗಂಗಪ್ಪ. ಹುಲಿಕೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.